ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.

**ಸಿ.ಸಿ ನಂ.176/2022 .**

ದಿನಾಂಕ :12 ನೇ ಜನವರಿ 2023 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ- ಪಿರ್ಯಾದಿ ಪರ ವಕೀಲರಿಂದ : -

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಹಿ ಮಾಡಿ ಸಲ್ಲಿಸಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿರುತ್ತದೆ. ಈ ಕೇಸಿಗೆ ಸಂಬಂಧಪಟ್ಟಂತೆ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ, ಸದರಿ ದಾಖಲೆಗಳನ್ನು ಈ ಮುಂದಿನಂತೆ ಗುರುತಿಸಲಾಗಿರುತ್ತದೆ.

ಆರೋಪಿ ನೀಡಿದ ದಿನಾಂಕ 05.12.2021 ರ ಚೆಕ್ ಅನ್ನು ನಿ ಪಿ 1 ಎಂದು ಗುರುತಿಸಲಾಯಿತು ಹಾಗೂ ನಿ ಪಿ 1 ರಲ್ಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ಗುರುತಿಸಿದ ಮೇರೆಗೆ ಆರೋಪಿಯ ಸಹಿಯನ್ನು ನಿ ಪಿ 1 ಎ ಎಂದು ಗುರುತಿಸಲಾಯಿತು. ಬ್ಯಾಂಕಿನವರು ನೀಡಿದ ದಿನಾಂಕ 29.12.2021 ಹಾಗೂ 30.12.2021 ರ ಎರಡು ಹಿಂಬರಹಗಳನ್ನು ನಿ ಪಿ 2 ಮತ್ತು 3 ಎಂದು, ದಿನಾಂಕ 10.01.2022 ರ ವಕೀಲರ ಮೂಲಕ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ನಿ ಪಿ 4 ಎಂದು, ಎರಡು ಅಂಚೆ ರಶೀದಿಗಳನ್ನು ನಿ ಪಿ 5 ಮತ್ತು 6 ಎಂದು, ಎರಡು ಅಂಚೆ ಸ್ವೀಕೃತಿಗಳನ್ನು ನಿಪಿ 7 ಮತ್ತು 8 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಒಪ್ಪಂದ ಪತ್ರವನ್ನು ಗುರುತಿಸಲು ಆರೋಪಿ ಪರ ವಕೀಲರು ತಕರಾರು ಸಲ್ಲಿಸಿರುತ್ತಾರೆ . ಆದ ಕಾರಣ ಮುಂದುವರಿದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಖ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

(ಸಾಕ್ಷಿಯವರ ಸಹಿ)

ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.